**<u>ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು</u>**

ದಿನಾಂಕಃ  09 ನೇ  ಜೂನ್ ತಿಂಗಳು  2025 ರಂದು

**<u>ಸಿಸಿ ನಂ.744/2023</u>**

**ಫಿರ್ಯಾದುದಾರರುಃ** ಶ್ರೀ ಸಚೇಂದ್ರ, ಬಿನ್ ರಾಮಸ್ವಾಮಿ ಟಿ.ಎಂ.
45 ವರ್ಷ, ವಾಸಃ ತಟ್ಟೇಕೆರೆ ಗ್ರಾಮ,
ಹನಗೋಡು ಹೋಬಳಿ, ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ

**– ವಿರುದ್ಧ –**

**ಆರೋಪಿಃ** ಶ್ರೀ ಕರಿಯಪ್ಪ ಕೆ.ಬಿ., ಬಿನ್ ಬಾಲಕೃಷ್ಣ ಕೆ.ಬಿ.,
39 ವರ್ಷ, ವಾಸಃ ಡೋರ್ ನಂ. 9578,
2 ನೇ ಹಂತ, ಬಸ್ ಡಿಪೋ ಹತ್ತಿರ,
ವಿಜಯನಗರ 4 ನೇ ಹಂತ, ಮೈಸೂರು – 570032,
ಮತ್ತು ಡೋರ್ ನಂ.339, ವಿಜಯನಗರ 4 ನೇ ಹಂತ,
ಆರ್.ಎಂ.ಪಿ ಲೇ ಔಟ್, ಮೈಸೂರು

**<u>ದಂಡ ಪ್ರಕ್ರಿಯಾ ಸಂಹಿತೆಯ ಕಲಂ 251 ರ ಅಡಿಯಲ್ಲಿ ಆರೋಪಣಾ ಸಾರಾಂಶ</u>**

ಆರೋಪಿಯಾದ ನೀವು ಮತ್ತು ಫಿರ್ಯಾದಿದಾರರಾದ ಸಚೇಂದ್ರ ರವರು ಹಲವಾರು ವರ್ಷಗಳಿಂದ ಪರಿಚಿತರಾಗಿದ್ದು, ನಿಮ್ಮ ಕಾನೂನುಬದ್ಧ ಅವಶ್ಯಕತೆಗಾಗಿ ಅಂದರೆ ನಿಮ್ಮ ಟಿಂಬರ್ ವ್ಯಾಪಾರದ ಅಭಿವೃದ್ಧಿಗಾಗಿ ಡಿಸೆಂಬರ್ 2022 ರಲ್ಲಿ ನೀವು ಅವರಿಂದ ರೂ.10,00,000/- ಗಳನ್ನು ಹತ್ತು ತಿಂಗಳ ಒಳಗೆ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿದ್ದು, ಹತ್ತು ತಿಂಗಳ ನಂತರ ಫಿರ್ಯಾದುದಾರರು ನಿಮ್ಮನ್ನು ಭೇಟಿಯಾಗಿ ಸಾಲ ಮರುಪಾವತಿಸುವಂತೆ ಕೇಳಿದಾಗ ನೀವು 22.09.2023 ರ ದಿನಾಂಕ ನಮೂದಿಸಿ ಸ್ಟೇಟ್ ಬ್ಯಾಂಕ್ ಆಫ್

ಇಂಡಿಯಾ, ಎಸ್ ಜೆ. ರಸ್ತೆ ಹುಣಸೂರು ಶಾಖೆಯ ಚೆಕ್ ಸಂಖ್ಯೆ 645774 ಅನ್ನು ರೂ.10,00,000/-ಗಳಿಗೆ ಫಿರ್ಯಾದಿದಾರರಿಗೆ ನೀಡಿದ್ದು, ಅದನ್ನು ಫಿರ್ಯಾದಿದಾರರು ತಮ್ಮ ಖಾತೆ ಹೊಂದಿದ ಕೆನರಾ ಬ್ಯಾಂಕ್, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲ" ಎಂಬ ಕಾರಣಕ್ಕಾಗಿ ಸದರಿ ಚೆಕ್ ಅಮಾನ್ಯಗೊಂಡು ದಿನಾಂಕ 25.09.2023 ರಂದು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿದ್ದು, ಈ ಬಗ್ಗೆ ಫಿರ್ಯಾದಿದಾರರು ದಿನಾಂಕ 03.10.2023 ರಂದು ತಮ್ಮ ವಕೀಲರ ಮೂಲಕ ನೋಂದಾಯಿತ ಅಂಚೆಯಲ್ಲಿ ನೋಟೀಸನ್ನು ನೀಡಿದ್ದು, ಸದರಿ ನೋಟೀಸು ದಿನಾಂಕ 19.10.2023 ರಂದು ನಿಮಗೆ ಖುದ್ದಾಗಿ ಜಾರಿಯಾಗಿದ್ದರೂ ಸಹ ನೀವು ಚೆಕ್‌ನಲ್ಲಿ ನಮೂದಿಸಿದ ಹಣವನ್ನು ನೀಡದೆ ಇರುವುದರಿಂದ ನೀವು ನೆಗೋಷಿಯೆಬಲ್ ಇನ್‌ಸ್ಟ್ರುಮೆಂಟ್ಸ್ ಕಾಯ್ದೆಯ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರೆಂದು ನಿಮ್ಮ ಮೇಲೆ ಆರೋಪಣೆ ಇರುತ್ತದೆ.

| | |
|---|---|
| ಪ್ರಶ್ನೆಃ1 | ನಿಮಗೆ ತಿಳಿದಿರುವ ಭಾಷೆಯಲ್ಲಿ ಓದಿ ವಿವರಿಸಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆಃ 2 | ನೀವು ಮೇಲಿನ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ಆಗಬೇಕೆಂದು ಬಯಸುವಿರಾ? |
| ಉತ್ತರಃ | ತಪ್ಪು ಮಾಡಿಲ್ಲ. ವಿಚಾರಣೆಯಾಗಬೇಕು |

ಮೇಲ್ಕಾಣಿಸಿದ ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ದಾಖಲಿಸಲಾಗಿದೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

ಸಹಿ/-

ಸಹಿ/-

(ಅನಿತ)

ಆರೋಪಿ

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ., ಹುಣಸೂರು.**